**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

**O.S. No. 81/2025**

**ಸಾಕ್ಷಿಯನ್ನು ದಿನಾಂಕಃ 13.11.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ. ಜಿ.ಪಿ.ಆರ್. ವಕೀಲರಿಂದಃ**

ಈ ದಾವೆಯಲ್ಲಿ ನಾನು **ವಾದಿಯಾಗಿರುತ್ತೇನೆ**. ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು, ಸದರಿ ಪ್ರಮಾಣ ಪತ್ರದಲ್ಲಿರುವ ಅಂಶಗಳನ್ನು ನಾನೇ ಖುದ್ದಾಗಿ ಬರೆಸಿರುತ್ತೇನೆ ಹಾಗೂ ಅದರಲ್ಲಿರುವ ಅಂಶಗಳು ಸತ್ಯವೆಂದು ಪ್ರಮಾಣೀಕರಿಸುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ನನ್ನ ದಾವೆಯ ಜೊತೆ ಜೊತೆ ಕೆಲವು ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

01 ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-1** ಎಂದು, 01 ಋಣಭಾರ ರಾಹಿತ್ಯ ಪ್ರಮಾಣ ಪತ್ರದ ಆನ್ ಲೈನ್ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-2** ಎಂದು, ನಾನು ಪ್ರತಿವಾದಿಗೆ ನನ್ನ ವಕೀಲರ ಮೂಲಕ ಕಳುಹಿಸಿದ ನೋಟೀಸ್ ನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-3** ಎಂದು, 01 ಅಂಚೆ ರಸೀದಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-4** ಎಂದು ಮತ್ತು ಪ್ರತಿವಾದಿ ಕಳುಹಿಸಿದ ಪ್ರತ್ಯುತ್ತರ ನೋಟೀಸ್ ನ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-5** ಎಂದುಗುರುತಿಸಲಾಯಿತು.

**ಈ ಹಂತದಲ್ಲಿ ವಾದಿಗಳ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶವನ್ನು ಕೋರಿದ್ದು, ಸಮಯಾವಕಾಶವನ್ನು ನೀಡಿ ಮುಂದೂಡಲಾಯಿತು.**

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸಾ ಸ ಇ ಒ.,**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ಹೆಗ್ಗಡದೇವನಕೋಟೆ.**